ಕರ್ನಾಟಕ ಸರ್ಕಾರ

ಸಂಖ್ಯೆ: ಡಿಪಿಎಆರ್ 47 ಎಸ್‌ಎಂಆರ್ 2012

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 09.07.2014

## ಅಧಿಸೂಚನೆ

ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಲಾದ, 3ನೇ ಪ್ರಕರಣದ (1) ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು 1963ರ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳನ್ನು ಮತ್ತಷ್ಟು ತಿದ್ದುಪಡಿ ಮಾಡುವ ಈ ಮುಂದಿನ ನಿಯಮಗಳ ಕರಡನ್ನು, ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ, ಅದರಿಂದ ತೊಂದರೆಗೊಳಗಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು ಅದು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಹದಿನೈದು ದಿನಗಳ ತರುವಾಯ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಸದರಿ ಕರಡಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಮೇಲೆ ನಿಗದಿಪಡಿಸಿದ ಅವಧಿಯು ಮುಕ್ತಾಯವಾಗುವುದಕ್ಕೆ ಮೊದಲು ಯಾರೇ ವ್ಯಕ್ತಿಯಿಂದ ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ವಿಧಾನ ಸೌಧ, ಬೆಂಗಳೂರು-560 001 ಇವರಿಗೆ ಸಲ್ಲಿಸಬಹುದು.

## ಕರಡು ನಿಯಮಗಳು

1. **ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) (ತಿದ್ದುಪಡಿ) ನಿಯಮಗಳು, 2014 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ನಿಯಮ 3 ರ ತಿದ್ದುಪಡಿ:-** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 14ರ ಉಪ ನಿಯಮ (2)ರ ಖಂಡ (ಎನ್) ರಲ್ಲಿನ ನಮೂದುಗಳ ಬದಲಾಗಿ ಕೆಳಕಂಡವುಗಳನ್ನು ಪ್ರತಿಸ್ಥಾಪಿಸತಕ್ಕದ್ದು:-

. . . . 2

"ಶ್ರವಣ ಸಾಧನ ಖರೀದಿಯ ಸಂಬಂಧದ ವೆಚ್ಚವನ್ನು ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳ (CGHS) ಅಡಿಯಲ್ಲಿ ದಿನಾಂಕ: 21.03.2012ರ ಅಧಿಕೃತ ಜ್ಞಾಪನ ಸಂಖ್ಯೆ: **S.14025/10/2002/MS** ರಲ್ಲಿ ನಿಗಧಿಪಡಿಸಿರುವ ದರದಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಸರ್ಕಾರಿ ನೌಕರನ ಇಡೀ ಸೇವಾವಧಿಯಲ್ಲಿ ಎರಡು ಬಾರಿ ಮಾತ್ರ ಪಡೆಯಲು ಅನುಮತಿಸತಕ್ಕದ್ದು:-

(i) ಶ್ರವಣ ಸಾಧನ ಖರೀದಿಯ ವೆಚ್ಚದ ಮರುಪಾವತಿ ಸೌಲಭ್ಯವು ಸರ್ಕಾರಿ ನೌಕರನಿಗೆ ಮಾತ್ರ ಅಂಗೀಕಾರಾರ್ಹವಾಗಿರುತ್ತದೆ. ಆದರೆ ಆತನ ಕುಟುಂಬದ ಸದಸ್ಯರಿಗೆ ಈ ಸೌಲಭ್ಯವಿರುವುದಿಲ್ಲ;

(ii) ಸರ್ಕಾರಿ ಆಸ್ಪತ್ರೆಯ ಇ.ಎನ್.ಟಿ. ವಿಭಾಗದ ಮುಖ್ಯಸ್ಥರು ನೀಡುವ ಪ್ರಮಾಣ ಪತ್ರದ ಆಧಾರದ ಮೇಲೆ ಖರೀದಿಸುವ ಶ್ರವಣ ಸಾಧನದ ವೆಚ್ಚದ ಮರುಪಾವತಿಯು ಅಂಗೀಕಾರಾರ್ಹವಾಗಿರುವುದು. ಇ.ಎನ್.ಟಿ. ವಿಭಾಗದ ಮುಖ್ಯಸ್ಥರು ಶಿಫಾರಸ್ಸು ಮಾಡುವ ಪ್ರಮಾಣ ಪತ್ರದಲ್ಲಿ ಸರ್ಕಾರಿ ನೌಕರನಿಗೆ ಅವಶ್ಯಕವಿರುವ ಶ್ರವಣ ಸಾಧನದ ಮಾದರಿಯನ್ನು ನಿರ್ದಿಷ್ಟಪಡಿಸಿರತಕ್ಕದ್ದು;

(iii) ಸರ್ಕಾರಿ ಆಸ್ಪತ್ರೆಯ ಇ.ಎನ್.ಟಿ. ವಿಭಾಗದ ಮುಖ್ಯಸ್ಥರು ನೀಡುವ ಪ್ರಮಾಣ ಪತ್ರದ ಆಧಾರದ ಮೇಲೆ ಶ್ರವಣ ಸಾಧನವನ್ನು ಖರೀದಿಸಲು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳು ಅನುಮತಿಸಬಹುದಾಗಿದೆ ಹಾಗೂ ಕಳೆದ ಐದು ವರ್ಷಗಳಲ್ಲಿ ಶ್ರವಣ ಸಾಧನ ಖರೀದಿಯ ವೆಚ್ಚವನ್ನು ಮರುಪಾವತಿ ಪಡೆದಿಲ್ಲವೆಂಬ ಮುಚ್ಚಳಿಕೆಯನ್ನು (undertaking) ಸರ್ಕಾರಿ ನೌಕರನಿಂದ ಪಡೆಯುವುದು.

(iv) ಸರ್ಕಾರಿ ಆಸ್ಪತ್ರೆಯ ಇ.ಎನ್.ಟಿ. ವಿಭಾಗದ ಮುಖ್ಯಸ್ಥರು ಶ್ರವಣ ಸಾಧನದ ನಿರುಪಯುಕ್ತತೆ ಕುರಿತು ನೀಡುವ ಪ್ರಮಾಣ ಪತ್ರದ ಆಧಾರದ ಮೇಲೆ 5 ವರ್ಷಗಳ ನಂತರ ಶ್ರವಣ ಸಾಧನವನ್ನು ಬದಲಾಯಿಸಲು ಅನುಮತಿಸಬಹುದಾಗಿದೆ. ಶ್ರವಣ ಸಾಧನದ ನಿರ್ವಹಣೆ ಮತ್ತು ದುರಸ್ತಿಯ ಜವಾಬ್ದಾರಿಯು ಸರ್ಕಾರಿ ನೌಕರನದ್ದಾಗಿರುತ್ತದೆ;

(v) ಶ್ರವಣ ಸಾಧನ ಖರೀದಿಗೆ ಅನುಮತಿಸಿರುವ ಕುರಿತಾದ ವಿವರಗಳನ್ನು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳು ನಿರ್ವಹಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಡಿ. ನಾಗೇಶ್ ಪಾಟೀಲ್)**
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾನಿಯಮಗಳು-2)

<u>ಗೆ:</u>

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು- ಇವರಿಗೆ ವಿಶೇಷ ರಾಜ್ಯ ಪತ್ರದ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 200 ಪ್ರತಿಗಳನ್ನು ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾನಿಯಮಗಳು-2), ಕೊಠಡಿ ಸಂಖ್ಯೆ: 30, ವಿಧಾನ ಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು.

<u>ಇವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

. . . . 3

3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಮಂಡಲ, ವಿಧಾನ ಸೌಧ, ಬೆಂಗಳೂರು
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ವಿಧಾನ ಸೌಧ, ಬೆಂಗಳೂರು
9. ಎಲ್ಲಾ ಇಲಾಖಾ ಮುಖ್ಯಸ್ಥರು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
12. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
13. ಮಹಾ ನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009.
15. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
16. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
17. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
18. ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು.
19. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.
22.

*ವಿ.ಸೂ. :- ಈ ಅಧಿಸೂಚನೆಯು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 47 ಎಸ್‌ಎಂಆರ್ 2012, ದಿನಾಂಕ: 09.07.2014ರ ಕನ್ನಡಾನುವಾದವಾಗಿದೆ.*